ಹಾವೇರಿಯಲ್ಲಿ ಜಿಲ್ಲಾ ನ್ಯಾಯಾಲಯ ಪ್ರಾರಂಭಿಸುವುದು

4996 - ಶ್ರೀ ಶಿವಣ್ಣನವರ್ ಬಸವರಾಜ್ ನೀಲಪ್ಪ (ಹಾವೇರಿ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಎಲ್ಲಾ ಜಿಲ್ಲೆಗಳಿಗೂ ಜಿಲ್ಲಾ ನ್ಯಾಯಾಲಯಗಳು ಮಂಜೂರು ಆಗಿದೆಯೇ? ಹಾಗಿದ್ದಲ್ಲಿ ಎಲ್ಲೆಲ್ಲಿ ಜಿಲ್ಲಾ ನ್ಯಾಯಾಲಯಗಳು ಪ್ರಾರಂಭವಾಗಿದೆ?*

ಆ) *ಹಾವೇರಿ ಜಿಲ್ಲಾ ನ್ಯಾಯಾಲಯ ಇನ್ನೂ ಪ್ರಾರಂಭವಾಗದಿರಲು ಕಾರಣವೇನು? ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?*

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಉಡುಪಿ ಮತ್ತು ಚಾಮರಾಜನಗರ ಜಿಲ್ಲೆಗಳನ್ನು ಹೊರತು ಪಡಿಸಿ ಉಳಿದ ಜಿಲ್ಲೆಗಳಲ್ಲಿ ಜಿಲ್ಲಾ ನ್ಯಾಯಾಲಯಗಳನ್ನು ಸ್ಥಾಪಿಸಲು ಮಂಜೂರಾತಿ ನೀಡಿದೆ. ಹೊಸದಾಗಿ ಸೃಜಿಸಲ್ಪಟ್ಟ ಹಾವೇರಿ, ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಜಿಲ್ಲಾ ನ್ಯಾಯಾಲಯಗಳು ಇನ್ನೂ ಸ್ಥಾಪನೆಯಾಗಬೇಕಾಗಿದೆ.

ಆ) ಹಾವೇರಿಯಲ್ಲಿನ ಜಿಲ್ಲಾ ನ್ಯಾಯಾಲಯವು ಸೂಕ್ತ ಸ್ಥಳಾವಕಾಶ ಲಭ್ಯವಾದ ನಂತರ ಜಿಲ್ಲಾ ನ್ಯಾಯಾಲಯವನ್ನು ಪ್ರಾರಂಭಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಕುಂದಗೋಳ ತಾಲ್ಲೂಕಿನಲ್ಲಿ ರಸ್ತೆ ಕಾಮಗಾರಿ ಕೈಗೊಳ್ಳುವುದು

4997 - ಶ್ರೀ ಶಿವಳ್ಳಿ ಚನ್ನಬಸಪ್ಪ ಸತ್ಯಪ್ಪ (ಕುಂದಗೋಳ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕುಂದಗೋಳ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಶರವಾಡ- ಸವಣೂರು ರಸ್ತೆಯು ಕೆಟ್ಟು ಹೋಗಿರುವುದರಿಂದಾಗಿ ವಾಹನಗಳ ಒಡಾಟಕ್ಕೆ ತೊಂದನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ರಸ್ತೆಯನ್ನು ದುರಸ್ತಿಗೊಳಿಸಲು ಸಾರ್ವಜನಿಕರು ಮುಷ್ಕರ ಮಾಡಿದ್ದು ನಿಜವಲ್ಲವೆ?*

ಇ) *ಸದರಿ ರಸ್ತೆಯ ದುರಸ್ತಿಗಾಗಿ ಈ ಹಿಂದೆ 15 ಲಕ್ಷ ರೂ.ಗಳು ಮಂಜೂರಾಗಿದ್ದರೂ ದುರಸ್ತಿ ಕಾರ್ಯವನ್ನು ಕೈಗೆತ್ತಿಕೊಳ್ಳದಿರಲು ಕಾರಣಗಳೇನು?*

ಈ) *ಹಾಗಿದ್ದಲ್ಲಿ ಈ ಕಾರ್ಯವನ್ನು ಎಂದಿನಿಂದ ಪ್ರಾರಂಭಿಸಲಾಗುವುದು?*

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಸದರೀ ರಸ್ತೆ ರಿಪೇರಿಯ ಅವಶ್ಯಕತೆ ಸರಕಾರದ ಗಮನಕ್ಕೆ ಬಂದಿದೆ.

ಆ) ನಿಜ.

ಇ) ದುರಸ್ತಿ ಕೆಲಸವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಶೀಘ್ರದಲ್ಲಿಯೇ ಕೆಲಸವನ್ನು ಪ್ರಾರಂಭಿಸಲಾಗುವುದು.

ರಾಜ್ಯದ ಕ್ರೀಡಾಂಗಣಗಳು

4998 - ಶ್ರೀ ಎನ್. ಸಂಪಂಗಿ (ಬಾಗೇಪಲ್ಲಿ) : ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕೋಲಾರ ಜಿಲ್ಲೆಯಲ್ಲಿರುವ ತಾಲ್ಲೂಕು ಮಟ್ಟದ ಕ್ರೀಡಾಂಗಣಗಳು ಎಷ್ಟು? ಎಷ್ಟು ಕ್ರೀಡಾಂಗಣಗಳ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ? ಎಷ್ಟು ಕ್ರೀಡಾಂಗಣಗಳ ಕಾಮಗಾರಿ ಪ್ರಗತಿಯಲ್ಲಿದೆ?*

ಆ) *ಬಾಗೇಪಲ್ಲಿ ಪಟ್ಟಣದ ಕ್ರೀಡಾಂಗಣದ ಕಾಮಗಾರಿ ಪೂರ್ಣವಾಗಿದೆಯೇ? ಹಾಗಿಲ್ಲದಿದ್ದಲ್ಲಿ, ಕ್ರೀಡಾಂಗಣ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಇ) *ಏಕಲವ್ಯ ಪ್ರಶಸ್ತಿಯನ್ನು ಸರ್ಕಾರ ಎಷ್ಟು ವರ್ಷಗಳಿಂದ ಕ್ರೀಡಾಪಟುಗಳಿಗೆ ನೀಡುತ್ತಾ ಬಂದಿದೆ? ಹಾಗಿದ್ದಲಿ ಇಲ್ಲಿಯವರೆಗೆ ಈ ಪ್ರಶಸ್ತಿಯನ್ನು ಪಡೆದವರ ಹೆಸರುಗಳ ಪಟ್ಟಿಯನ್ನು ಒದಗಿಸಿಕೊಡಲಾಗುವುದೇ?*

ಈ) *ರಾಷ್ಟ್ರೀಯ ಕ್ರೀಡಾ ಕೂಟದ ಸಮಯದಲ್ಲಿ ಸರ್ಕಾರ ಕಟ್ಟಿಸಿದ ಕ್ರೀಡಾಂಗಣಗಳ ಕಾಮಗಾರಿಗಳು ಸಂಪೂರ್ಣವಾಗಿ ಮುಗಿದಿದೆಯೇ? ಪೂರ್ಣಕಾಮಗಾರಿ ಮುಗಿದಿದ್ದಲ್ಲಿ, ಅವು ಬಳಕೆಯಲ್ಲಿವೆಯೇ? ಕಾಮಗಾರಿ ಮುಗಿಯದಿರುವ ಕ್ರೀಡಾಂಗಣಗಳು ಯಾವುವು? ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಉ) *ಕೋಲಾರದಲ್ಲಿರುವ ಜಿಲ್ಲಾ ಕ್ರೀಡಾಂಗಣ ಪ್ರಸ್ತುತ ಬಳಕೆಯಲ್ಲಿದೆಯೇ? ಕ್ರೀಡಾಗಾರರಿಗೆ ಬೇಕಾದ ಸೌಲಭ್ಯಗಳು ಈ ಕ್ರೀಡಾಂಗಣದಲ್ಲಿದೆಯೇ?*

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು) :

ಅ) ಕೋಲಾರ ಜಿಲ್ಲೆಯಲ್ಲಿ 9 ತಾಲ್ಲೂಕು ಮಟ್ಟದ ಕ್ರೀಡಾಂಗಣಗಳನ್ನು ನಿರ್ಮಿಸಲು ಯೋಜಿಸಲಾಗಿದೆ. 6 ತಾಲ್ಲೂಕು ಕ್ರೀಡಾಂಗಣಗಳ ನಿರ್ಮಾಣ ಕಾಮಗಾರಿ ಪ್ರಾರಂಭಿಸಲಾಗಿದೆ. ಹಾಗೂ 3 ತಾಲ್ಲೂಕು ಕ್ರೀಡಾಂಗಣಗಳ ಕಾಮಗಾರಿ ಪ್ರಾರಂಭಿಸಲು ಸೂಕ್ತ ನಿವೇಶನ ಪಡೆಯಲಾಗುತ್ತಿದೆ.

ಆ) ಬಾಗೇಪಲ್ಲಿ ತಾಲ್ಲೂಕು ಕ್ರೀಡಾಂಗಣ ಇನ್ನೂ ಪೂರ್ಣಗೊಂಡಿರುವುದಿಲ್ಲ. ನೆಲಸಮತಟ್ಟು ಕಾಮಗಾರಿ ಮುಗಿದಿದ್ದು ಚರಂಡಿ ಕೆಲಸ ಪ್ರಗತಿಯಲ್ಲಿದೆ.

ಇ) ಕರ್ನಾಟಕ ಸರ್ಕಾರವು ಕ್ರೀಡೆಯಲ್ಲಿ ವಿಶೇಷ ಸಾಧನೆ ಮಾಡಿದಂತಹ ಕ್ರೀಡಾಪಟುಗಳಿಗೆ 1992ನೇ ಸಾಲಿನಿಂದ ಏಕಲವ್ಯ ಪ್ರಶಸ್ತಿಯನ್ನು ನೀಡಿ ಪ್ರೋತ್ಸಾಸಲಾಗುತ್ತಿದೆ. ಈವರೆಗೆ ಒಟ್ಟು 106 ಜನ